## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ; 400
2. ವಿಧಾನ ಪರಿಷತ್ತ ಸದಸ್ಯರು : ಶ್ರೀ ಅ. ದೇವೆಗೌಡ (ಪದವೀಧರರ ಕ್ಷೇತ್ರ)
3. ಉತ್ತರಿಸ ಬೇಕಾದ ದಿನಾಂಕ : 04.02.2021
4. ಉತ್ತರಿಸ ಬೇಕಾದ ಸಚಿವರು : ಮಾನ್ಯ ಮುಖ್ಯ ಮಂತ್ರಿಗಳು

| ಕ್ರಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಮತ್ತು ಶಿಕ್ಷಣ ಇಲಾಖೆಗಳ ಆದೇಶದಂತೆ ದಿನಾಂಕ:30.12.2015 ರೊಳಗೆ ಮರಣ/ನಿವೃತ್ತಿ /ವರ್ಗಾವಣೆ ಹಾಗೂ ಇನ್ನಿತರ ಕಾರಣಗಳಿಂದ ತೆರವಾದ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆಯೇ; | ದಿನಾಂಕ:30.12.2015 ರೊಳಗೆ ಮರಣ/ನಿವೃತ್ತಿ /ವರ್ಗಾವಣೆ ಹಾಗೂ ಇನ್ನಿತರ ಕಾರಣಗಳಿಂದ ತೆರವಾದ ಹುದ್ದೆಗಳನ್ನು ಭರ್ತಿ ಮಾಡಲು ಕಲ್ಪಿಸಿರುವ ಅವಕಾಶವನ್ನು ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8/2020, ದಿನಾಂಕ:10.06.2020 ರನ್ವಯ 2020-21ನೇ ಸಾಲಿನಲ್ಲಿ ಭರ್ತಿ ಮಾಡುವುದನ್ನು ತಾತ್ಕಾಲಿಕವಾಗಿ ತಡೆಹಿಡಿಯಲಾಗಿರುತ್ತದೆ. |
| (ಆ) | 2020-21ನೇ ಸಾಲಿನಲ್ಲಿ ಆರ್ಥಿಕ ಇಲಾಖೆಯು ಕೋವಿಡ್-19ರ ಪರಿಣಾಮ ಸುತ್ತೋಲೆ ಹೊರಡಿಸಿ ವಿವಿಧ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಆಯ್ಕೆಯಾಗಿರುವ ಅಭ್ಯರ್ಥಿಗಳ ನೇಮಕಾತಿಯನ್ನು ತಡೆ ಹಿಡಿದಿರುವುದು ಸರಿಯೇ; | ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿರುವುದರಿಂದ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಅಗತ್ಯವಾಗಿರುತ್ತದೆ. ಇದಕ್ಕಾಗಿ ಸರ್ಕಾರದ ವೆಚ್ಚದ ಬಾಬ್ತಿನಲ್ಲಿ ಮಿತವ್ಯಯ ಪಾಲಿಸುವ ಅನಿವಾರ್ಯವಾಗಿರುವುದರಿಂದ, ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8 2020, ದಿನಾಂಕ:10.06.2020 ಹಾಗೂ ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ:06.07.2020 ರನ್ವಯ ಎಲ್ಲಾ ಶಾಲಾ ಕಾಲೇಜುಗಳಲ್ಲಿನ ಎಲ್ಲಾ ಹಂತದ ನೇಮಕಾತಿಯನ್ನು ತಡೆಹಿಡಿಯಲಾಗಿರುತ್ತದೆ. |
| (ಇ) | ಆರ್ಥಿಕ ಇಲಾಖೆಯು ಹೊರಡಿಸಿರುವ ಸುತ್ತೋಲೆಯಿಂದ ಹಲವಾರು ವರ್ಷಗಳಿಂದ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕೆಲಸ ನಿರ್ವಹಿಸುತ್ತಿರುವವರ ವಯೋಮಿತಿ ಮೀರುತ್ತಿದ್ದು, ಆರ್ಥಿಕ ಇಲಾಖೆಯು ಹೊರಡಿಸಿರುವ ಸುತ್ತೋಲೆಯನ್ನು ಸರ್ಕಾರವು ಹಿಂಪಡೆಯಲು ಸೂಕ್ತ ಕ್ರಮ ವಹಿಸುವುದೇ? | ರಾಜ್ಯದ ಆರ್ಥಿಕ ಸ್ಥಿತಿಯು ಸುಸ್ಥಿತಿಗೆ ಬಂದ ನಂತರ ಈ ಸಂಬಂಧ ಪರಿಶೀಲಿಸಲಾಗುವುದು. |

ಸಂಖ್ಯೆ:ಆಇ 17 ವೆಚ್ಚ-8/2021

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ